ಅ. ಹೌದು.

ಆ. ಇಲ್ಲ.

ಇ. ನಗರಪಾಲಿಕೆಯು ಪರವಾನಗಿಯನ್ನು ನವೀಕರಿಸುವ ಮೊದಲು ಕಂದಾಯವನ್ನು ಸಂಗ್ರಹಿಸುತ್ತದೆ.

ಕರ್ನಾಟಕ ರಾಜ್ಯ ಸಮಾಜ ಕಲ್ಯಾಣ ಸಲಹಾ ಮಂಡಳಿಗೆ ಅಧ್ಯಕ್ಷರನ್ನು ನೇಮಿಸುವ ಬಗ್ಗೆ

2155: ಶ್ರೀ ಜಿ. ಪುಟ್ಟಸ್ವಾಮಿಗೌಡ (ಹೊಳೇನರಸೀಪುರ):– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಕರ್ನಾಟಕ ರಾಜ್ಯ ಸಮಾಜ ಕಲ್ಯಾಣ ಸಲಹಾ ಮಂಡಳಿಗೆ ಅಧ್ಯಕ್ಷರನ್ನು ನೇಮಿಸಲಾಗಿದೆಯೇ;

ಆ. ಇಲ್ಲವಾದಲ್ಲಿ, ಅದಕ್ಕೆ ಕಾರಣಗಳು ಏನು ? ಮತ್ತು ಹುದ್ದೆಯು ಎಂದಿನಿಂದ ಖಾಲಿ ಇರುತ್ತದೆ;

ಇ. ಈ ಬಗ್ಗೆ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆಯೇ;

ಈ. ಹಾಗಿದ್ದಲ್ಲಿ, ಯಾವಾಗ;

ಉ. ಈ ಬಗ್ಗೆ ಕೇಂದ್ರ ಸರ್ಕಾರದೊಂದಿಗೆ ವಿಷಯವನ್ನು ಇತ್ಯರ್ಥಗೊಳಿಸಲು ಸರ್ಕಾರವು ತೆಗೆದುಕೊಳ್ಳಲು ಉದ್ದೇಶಿಸಿರುವ ಕ್ರಮಗಳೇನು ?

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಸಚಿವರು):–

ಅ. ಇಲ್ಲ.

ಆ. ಈ ಹುದ್ದೆಯು ದಿನಾಂಕ:25-11-91ರಿಂದ ಖಾಲಿ ಇರುತ್ತದೆ. ಹೆಸರುಗಳ ಯಾದಿ ಪಟ್ಟಿಯ ಬಗ್ಗೆ ಅಂತಿಮ ತೀರ್ಮಾನವಾಗಿಲ್ಲವಾದ್ದರಿಂದ ವಿಳಂಬವಾಗಿದೆ.

ಇ. ಈ ಬಗ್ಗೆ ಕೇಂದ್ರ ಸಮಾಜ ಕಲ್ಯಾಣ ಮಂಡಳಿ, ನವದೆಹಲಿ, ಇವರಿಗೆ ಸಂದೇಶವನ್ನು ಕಳುಹಿಸಲಾಗಿದೆ.

ಈ. ದಿನಾಂಕ:3-3-1993ರಂದು.

ಉ. ಈ ಬಗ್ಗೆ ಉಪಪ್ರಶ್ನೆ (ಇ) ಮತ್ತು (ಈ)ರಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳಲಾಗಿದೆ.

ಬೀದರ್ ಜಿಲ್ಲೆಯಲ್ಲಿ ಬಹಳಷ್ಟು ಮನೆಗಳು ಅಪೂರ್ಣ ಸ್ಥಿತಿಯಲ್ಲಿರುವ ಬಗ್ಗೆ

1527: ಶ್ರೀ ನಾರಾಯಣರಾವ್ ಮನಹಳ್ಳಿ, (ಬೀದರ್):– ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

1.ಬೀದರ್ ಜಿಲ್ಲೆಯಲ್ಲಿ ಬಹಳಷ್ಟು ಮನೆಗಳು ಅಪೂರ್ಣ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

2. ಹಾಗಿದ್ದಲ್ಲಿ, ಅವುಗಳನ್ನು ಯಾವಾಗ ಪೂರ್ಣಗೊಳಿಸಲಾಗುತ್ತದೆ;